# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 12(97)

**ಸದಸ್ಯರ ಹೆಸರು** : ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ)

**ಉತ್ತರಿಸಬೇಕಾದ ದಿನಾಂಕ** : 19-12-2022

**ಉತ್ತರಿಸಬೇಕಾದ ಸಚಿವರು** : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಶಿಕ್ಷಣ ಹಕ್ಕು ಕಾಯ್ದೆಯನ್ವಯ ವಿದ್ಯಾರ್ಥಿ- ಶಿಕ್ಷಕರ ಅನುಪಾತವನ್ನು ನಿಗದಿಪಡಿಸಲಾಗಿದೆಯೇ; | ಹೌದು.<br>**ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ** ಶಿಕ್ಷಣ ಹಕ್ಕು ಕಾಯ್ದೆಯನ್ವಯ ವಿದ್ಯಾರ್ಥಿ ಶಿಕ್ಷಕರ ಅನುಪಾತವನ್ನು 30:1 ನಿಗದಿಪಡಿಸಿದೆ.<br>**ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ** ಕರ್ನಾಟಕ ಶಿಕ್ಷಣ ಕಾಯ್ದೆ-1983ರಡಿಯಲ್ಲಿ ರಚಿತವಾಗಿರುವ ಕರ್ನಾಟಕ ಶಿಕ್ಷಣ ಕಾಯ್ದೆಯ ಶಿಕ್ಷಣ ಸಂಸ್ಥೆಗಳು (ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಮತ್ತು(ನಿಬಂಧನೆಗಳು) ನಿಯಮ 1999ರ ಅನುಬಂಧ-5ರ ಪ್ರಕಾರ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ 40:1 ರಂತೆ ಅನುಪಾತ ನಿಗಧಿಪಡಿಸಲಾಗಿದೆ. |
| ಆ) | ಹಾಗಿದ್ದಲ್ಲಿ, ನಿಗದಿಪಡಿಸಿದ ಅನುಪಾತ ಎಷ್ಟು; | |
| ಇ) | ರಾಜ್ಯದಲ್ಲಿ ಸರ್ಕಾರಿ, ಅನುದಾನಿತ, ವಸತಿ ಶಾಲೆಗಳಲ್ಲಿ ಬೇರೆ ಬೇರೆ ವಿದ್ಯಾರ್ಥಿ-ಶಿಕ್ಷಕರ ಅನುಪಾತ ಬೇರೆ ಬೇರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ.<br>ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಮೇಲಿನಂತೆ ವಿದ್ಯಾರ್ಥಿ-ಶಿಕ್ಷಕರ ಅನುಪಾತ ನಿಗಧಿಪಡಿಸಲಾಗಿದೆ. ಆದರೆ ವಸತಿ ಶಾಲೆಗಳು ಇಲಾಖಾ ವ್ಯಾಪ್ತಿಗೆ ಬರುವುದಿಲ್ಲ. ರಾಷ್ಟ್ರದಾದ್ಯಂತ ಏಕ ರೂಪ ಮಾದರಿಯ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಗೊಳಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. |
| ಈ) | ರಾಜ್ಯದಲ್ಲಿ ಎಲ್ಲಾ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿ ಶಿಕ್ಷಕರ ಅನುಪಾತವನ್ನು ಒಂದೇ ತರಹ ನಿಗದಿಪಡಿಸಲು ಇರುವ ತೊಂದರೆಗಳೇನು; | |
| ಉ) | ತೊಂದರೆಗಳಿಲ್ಲದಿದ್ದಲ್ಲಿ, ರಾಜ್ಯದಲ್ಲಿ ಏಕ ರೂಪ ವಿದ್ಯಾರ್ಥಿ ಶಿಕ್ಷಕರ ಅನುಪಾತ ನಿಗಧಿಪಡಿಸಿ ಆದೇಶ ಹೊರಡಿಸುವುದು ಯಾವಾಗ? | |

**ಸಂಖ್ಯೆ: ಇಪಿ 482 ಪಿಜಿಸಿ 2022**

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು